ಕರ್ನಾಟಕ ಸರ್ಕಾರ

ನಂ. ಕಾಇ 682 ಎಲ್ ಡಬ್ಲ್ಯೂಎ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು ದಿನಾಂಕ: 12.01.2023

ತಿದ್ದುಪಡಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 57 ಎಲ್ ಡಬ್ಲ್ಯೂಎ 2019 ದಿನಾಂಕ: 20.11.2019ರಲ್ಲಿ "ಅರಣ್ಯ ಮತ್ತು ಕಟ್ಟಿಗೆ ಡಿಪೋ (ಫಾರೆಸ್ಟ್ರಿ ಅಂಡ್ ಟಿಂಬರಿಂಗ್) ಉದ್ದಿಮೆಗಳಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯ ವ್ಯಾಪ್ತಿಗೆ ಒಳಪಡುವ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಅನ್ವಯವಾಗುವಂತೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿದ್ದು, ಸದರಿ ಅಧಿಸೂಚನೆಯ ಕನಿಷ್ಠ ವೇತನ ಕೋಷ್ಟಕದಲ್ಲಿ ಈ ಕೆಳಕಂಡ ತಿದ್ದುಪಡಿಗಳನ್ನು ಈ ಅಧಿಸೂಚನೆಯ ಮೂಲಕ ಹೊರಡಿಸಲಾಗಿದೆ.

1. "ವನ್ಯ ಜೀವಿ ಅರಣ್ಯ ಸಂಪತ್ತಿನ ಕಳ್ಳ ಬೇಟೆ ಕಾವಲುಗಾರ" ಹುದ್ದೆಯನ್ನು, "ಅರೆ ಕುಶಲ" ಪಟ್ಟಿಯಿಂದ "ಕುಶಲ ಕಾರ್ಮಿಕರ" ಪಟ್ಟಿಗೆ ವರ್ಗಾಯಿಸಲಾಗಿದೆ. "ಎಲಿಫೆಂಟ್ ಕಾವಡಿ" ಹುದ್ದೆಯನ್ನು "ಅಕುಶಲ ಪಟ್ಟಿ"ಯಿಂದ, "ಕುಶಲ ಕಾರ್ಮಿಕರ ಪಟ್ಟಿ"ಗೆ ವರ್ಗಾಯಿಸಲಾಗಿದೆ.

2. ಕಳ್ಳಬೇಟೆ ಕಾವಲುಗಾರಿಕೆಯ ಕೆಲಸಗಾರರು, ಕ್ಷಿಪ್ರಸ್ಪಂದನ ಕಾರ್ಯಪಡೆ, ಕಾಡಾನೆಗಳನ್ನು ಓಡಿಸುವುದು, ಅರಣ್ಯ ಸಂಪತ್ತಿನ ಸಂರಕ್ಷಣೆ, ನರ್ಸರಿ ಮತ್ತು ನೆಡುತೋಪುಗಳ ರಕ್ಷಣೆ/ ಪೋಷಣೆ, ಬೆಂಕಿ ಹಾವಳಿ ನಿಯಂತ್ರಣ ಇತ್ಯಾದಿ ಕೆಲಸಗಳನ್ನು ನಿರ್ವಹಿಸುತ್ತಿರುವ ಹೊರಗುತ್ತಿಗೆ ಕಾವಲುಗಾರರನ್ನು "ಕುಶಲ ಕಾರ್ಮಿಕರ ವರ್ಗ"ಕ್ಕೆ ಸೇರ್ಪಡೆಗೊಳಿಸಲಾಗಿದೆ.

ಉಳಿದಂತೆ ಸದರಿ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

A. Umadevi
12/1/2023

(ಎ. ಉಮಾದೇವಿ)
ಪೀಠಾಧಿಕಾರಿ-2,
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

ಇವರಿಗೆ: ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಈ ಅಧಿಸೂಚನೆಯನ್ನು ಇ-ರಾಜ್ಯಪತ್ರ (E-Gazette) ದಲ್ಲಿ ಪ್ರಕಟಿಸಲು ಕೋರಲಾಗಿದೆ.

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
4. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಇನ್ ಫೆಂಟ್ರಿ ರಸ್ತೆ, ಬೆಂಗಳೂರು.
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಭವನ, ಬೆಂಗಳೂರು (ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಎಲ್ಲಾ ಸದಸ್ಯರ ಗಮನಕ್ಕೆ ತರುವುದು).
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)
7. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು